# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 09 :2020-21 ದಿನಾಂಕ: 20.02.2021

## ದಾಸರಹಳ್ಳಿ ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿ.20.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಅಶೋಕ್ ಹಿಂದಾ, ವಾರ್ಡ್ ಕಮಿಟಿ ನೋಡಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀಮತಿ.ಅರ್ಚನ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.15
2. ಶ್ರಿ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
3. ಶ್ರೀಮತಿ.ಚೈತ್ರ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
4. ಶ್ರೀಮತಿ.ಚೇತನ ಕುಮಾರಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀಮತಿ.ಪವಿತ್ರ & ಶ್ಯಾಮಲಾ, ಲಿಂಕ್ ವರ್ಕರ್ಸ್ ಘನತ್ಯಾಜ್ಯ ವಿಭಾಗ, ಬಿಬಿಎಂಪಿ
6. ಶ್ರೀ.ಸತೀಶ್, ವಿದ್ಯುತ್ ಇಲಾಖೆ ಸಿಬ್ಬಂದಿ
7. ಶ್ರೀ.ಶ್ರೀನಿವಾಸ್ & ನರೇಶ್ ಕಂದಾಯ ವಸೂಲಿಗಾರರು, ಬಿಬಿಎಂಪಿ

ಶ್ರೀ.ಅಶೋಕ್ ಹಿಂದಾ, ನೋಡೆಲ್ ಅಧಿಕಾರಿ ಹಾಗೂ ಶ್ರೀಮತಿ.ಅರ್ಚನಾ, ಸದಸ್ಯ ಕಾರ್ಯದರ್ಶಿಗಳು, ವಾರ್ಡ್ ನಂ.15, ದಾಸರಹಳ್ಳಿ ರವರುಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ದಿ.06.02.2021 ರಂದು ದಾಸರಹಳ್ಳಿ ವ್ಯಾಪ್ತಿಯ ಎಸ್.ರಮೇಶ್ ರಸ್ತೆಯ ಚರಂಡಿಗಳಲ್ಲಿ ಹೂಳು ತುಂಬಿದ್ದು, ನೀರು ಸರಾಗವಾಗಿ ಹರಿಯದೇ ಚರಂಡಿಯಲ್ಲಿಯೇ ನಿಂತಿರುವ ಕಾರಣ ಸೊಳ್ಳೆಗಳು ಹೆಚ್ಚಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಬಗ್ಗೆ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿ, ಸದರಿ ಹೂಳು ತೆಗೆಯುವ ಕಾರ್ಯ ಪ್ರಗತಿಯಲ್ಲಿರುತ್ತದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

### 2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಅದರಲ್ಲಿ ಒಟ್ಟು ಪಾಸಿಟಿವ್ ಕೇಸ್ 1046, ಒಟ್ಟು ಬಿಡುಗಡೆ 1031, ಮರಣ ಹೊಂದಿದದವರು 13 ಹಾಗೂ ಒಟ್ಟು Active case ಪ್ರಕರಣಗಳು 2 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ.

Scanned with CamScanner